ಅ) ಹೆಚ್ಚುವರಿ ಕೊಠಡಿಗಳು ನಿರ್ಮಾಣದ ಬಗ್ಗೆ ಪರಿಶೀಲಿಸಲಾಗುವುದು.

ದೊಡ್ಡಬಳ್ಳಾಪುರ ತಾಲ್ಲೂಕಿನ ಬೆಳವಂಗಲ ಜ್ಯೂನಿಯರ್ ಕಾಲೇಜಿನ ಅವ್ಯವಸ್ಥೆ

2571(2987) ಶ್ರೀ ವಿ. ಕೃಷ್ಣಪ್ಪ (ದೊಡ್ಡಬಳ್ಳಾಪುರ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ದೊಡ್ಡಬಳ್ಳಾಪುರ ತಾಲ್ಲೂಕಿನ ಬೆಳವಂಗಲ ಜ್ಯೂನಿಯರ್ ಕಾಲೇಜಿನಲ್ಲಿ ಶಾಲಾ ಕೊಠಡಿಗಳು ಸಾಕಾಗದೆ ಮರಗಳ ಕೆಳಗೆ ತರಗತಿಗಳನ್ನು ನಡೆಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇರುವ ಕೊಠಡಿಗಳಲ್ಲಿ ಸರಿಯಾದ ಪೀಠೋಪಕರಣಗಳಿಲ್ಲದೆ ವಿದ್ಯಾರ್ಥಿಗಳು ನೆಲದ ಮೇಲೆ ಕುಳಿತು ತರಗತಿಗಳು ನಡೆಯುತ್ತಿರುವುದರ ಬಗ್ಗೆ ಸರ್ಕಾರವು ಏನು ಕ್ರಮ ತೆಗೆದುಕೊಂಡಿದೆ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಬೆಲವಂಗಲದ ಸರ್ಕಾರಿ ಸಂಯಕ್ತ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದಲ್ಲಿ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಾಗಿರುವುದರಿಂದ ಮಳೆಗಾಲದಲ್ಲಿ ಪಿ.ಯುಸಿ ತರಗತಿಗಳನ್ನು ಬೆಳ್ಳಿಗ್ಗೆ 8.30ರಿಂದ 12.000 ರವರೆಗೆ ನಂತರ ಪ್ರೌಢಶಾಲಾ ತರಗತಿಗಳು ಪಾಳಿ ಪದ್ಧತಿಯಲ್ಲಿ ನಡೆಯುತ್ತಿವೆ. ಪ್ರೌಢಶಾಲೆ ಪ್ರಾರಂಭವಾದ ನಂತರ ಕೊಠಡಿಗಳ ಕೊರತೆಯಿಂದ ಪದವಿ ಪೂರ್ವ ಕಾಲೇಜಿನ ಕೊನೆಯ ಒಂದು ಅವಧಿ ಮಾತ್ರ ಸಾಂಸ್ಕೃತಿಕ ಸೆಮಿನಾರ್ ಮತ್ತು ಸಾಮೂಹಿಕ ಅಧ್ಯಯನದ ತರಗತಿಗಳು ಶಾಲಾ ಆವರಣದ ವನದಲ್ಲಿ ಮರದ ಕೆಳಗೆ ನಡೆಯುತ್ತಿದೆ.

ಆ) ಹಾಲಿ ವರ್ಷದಲ್ಲಿ ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲು ಪರಿಶೀಲಿಸಲಾಗುವುದು ಮತ್ತು ಪೀಠೋಪಕರಣ ಒದಗಿಸಲು ಕ್ರಮಕ್ಕೆಗೊಳ್ಳಲಾಗುವುದು.

ತುರುವೇಕೆರೆ ತಾಲ್ಲೂಕಿನಲ್ಲಿರುವ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರತಕ್ಕ ಹುದ್ದೆಗಳ ಭರ್ತಿ

2572 (3332) ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) (ತುರುವೇಕೆರೆ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ತುರುವೇಕೆರೆ ತಾಲ್ಲೂಕಿನಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ.

ಅ) ಈ ಆರೋಗ್ಯ ಕೇಂದ್ರಗಳಲ್ಲಿ ಪ್ರತಿಯೊಂದು ವರ್ಗದಲ್ಲೂ ಮಂಜೂರಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

ಇ) ಈ ಹುದ್ದೆಗಳನ್ನು ತುಂಬಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ;

ಈ) ತುರುವೇಕೆರೆ ನಗರದ ಆಸ್ಪತ್ರೆಯಲ್ಲಿ ಮಹಿಳಾ ವೈದ್ಯರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ ಎಷ್ಟು ದಿನಗಳಲ್ಲಿ ಮಹಿಳಾ ವೈದ್ಯರನ್ನು ಹಾಕಲಾಗುವುದು?

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) 12 ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ.

ಆ) ಈ ಆರೋಗ್ಯ ಕೇಂದ್ರಗಳಿಗೆ ಮಂಜೂರಾದ ಹುದ್ದೆಗಳ ವಿವರ ಕೆಳಕಂಡಂತಿವೆ.

	ಮಂಜೂರು	ಖಾಲಿ
ವೈದ್ಯಾಧಿಕಾರಿಗಳು	15	3
ಇತರೇ ಸಿಬ್ಬಂದಿ	156	41

ಇ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಜಿಲ್ಲಾಧಿಕಾರಿಗೆ ಅಧಿಕಾರ ನೀಡಲಾಗಿದೆ. ವೈದ್ಯೇತರ ಸಿಬ್ಬಂದಿಯ ಕೆಲವು ಹುದ್ದೆಗಳನ್ನು ತುಂಬಲು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸುವುದು ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ಬಂದಿದೆ

ಉ) ಗುತ್ತಿಗೆ ಆಧಾರದ ಮೇಲೆ ವೈದ್ಯರನ್ನು ನೇಮಿಸಲು ಜಿಲ್ಲಾಧಿಕಾರಿಗಳಿಗೆ ಕೊಟ್ಟಿರುವ ಅಧಿಕಾರದಲ್ಲಿ ಮಹಿಳಾ ವೈದ್ಯರನ್ನು ನೇಮಿಸುವುದು ಸಹ ಸೇರಿರುತ್ತದೆ.

ತುರುವೇಕೆರೆ ತಾಲ್ಲೂಕಿನಲ್ಲಿನ ಪ್ರೌಢಶಾಲೆಗಳಿಗೆ ಗಣಕ ಯಂತ್ರ ಅಳವಡಿಕೆ

2574(3335) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) (ತುರುವೇಕೆರೆ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.